ಓ.ಎಸ್. ನಂ: 121/2021
ಪಿ.ಡಬ್ಲ್ಯು - 01

**ದಿನಾಂಕ:08-07-2025 ರಂದು ಸಾಕ್ಷಿಯನ್ನು ಕರೆಯಿಸಲಾಯಿತು ಮತ್ತು ಪ್ರಮಾಣೀಕರಿಸಲಾಯಿತು.**

**<u>ಮುಂದುವರೆದ ಮುಖ್ಯ ವಿಚಾರಣೆ : ವಾದಿ ಪರ ಶ್ರೀ.ಆರ್.ವಿ.ಎಮ್. ವಕೀಲರಿಂದ</u> :-**

ನಾನು ಈ ದಾವೆಗೆ ಸಂಬಂಧ ಪಟ್ಟಂತೆ ಈ ಕೆಳಗಿನ ದಾಖಲೆಗಳನ್ನು ಹಾಜರುಪಡಿಸುತ್ತಿದ್ದು, ಅವುಗಳನ್ನು ನನ್ನ ಪರವಾಗಿ ನಿಶಾನೆಗೊಳಿಸಲು ವಿನಂತಿಸಿಕೊಳ್ಳುತ್ತೇನೆ.

1) ಮರಾಠಿ ಭಾಷೆಯಲ್ಲಿರುವ ವಿಭಾಗ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ.1 ಎಂದು ಅದರ ಇಂಗ್ಲೀಷ ಭಾಷಾಂತರ ಪ್ರತಿಯನ್ನು ನಿಪಿ-1(ಎ) ಗುರುತಿಸಲಾಯಿತು. ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ ತಂದೆಯ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.
2) ಮುದ್ರಾಂಕಗಳ ಉಪಆಯುಕ್ತರು ಹಾಗೂ ಜಿಲ್ಲಾನೊಂದಾಣಾಧಿಕಾರಿಗಳು ನೀಡಿದ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-2 ಎಂದು ಗುರುತಿಸಲಾಯಿತು ಮತ್ತು ಚಲನ ಪ್ರತಿಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ-2(ಎ) ಎಂದು ಗುರುತಿಸಲಾಯಿತು.
3) ಜಮೀನ ಸರ್ವೆ ನಂ.96/3 ಮತ್ತು 96/7 ನೇದ್ದರ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ-3 ಮತ್ತು ನಿಪಿ-4 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ 1 ನೇ ಪ್ರತಿವಾದಿ ಏಕತರ್ಫಿಯಿದ್ದು, 2 ನೇ ಪ್ರತಿವಾದಿ ಮತ್ತು ಅವರ ಪರ ವಕೀಲರು ಗೈರು ಹಾಜರಿದ್ದು, ಪಾಟೀ ಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು. )**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)**

**(ಓ.ಹೇ.ಕೇ.ಸ.ಇದೆ)** **ಹೆಚ್ಚುವರಿ ದಿವಾಣಿ ನ್ಯಾಯಾಧೀಶರು**
**ಬಸವಕಲ್ಯಾಣ.**

**ಸಾಕ್ಷಿದಾರರ ಸಹಿ:-**